**All India Radio: Bangalore**
**National Bulletin In Kannada**
**07.07.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**07.07.2026 07.35 a.m.**
******************

ಮುಖ್ಯಾಂಶಗಳು

೧. ಜಕಾರ್ತದಲ್ಲಿಂದು ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂತೊ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ

೨. ಅಯೋಧ್ಯೆ ರಾಮಮಂದಿರ ದೇಣಿಗೆ ದುರ್ಬಳಕೆ ಪ್ರಕರಣ; ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರೈ ಹಾಗೂ ಸದಸ್ಯ ಡಾ. ಅನಿಲ್ ಮಿಶ್ರಾ ರಾಜೀನಾಮೆ ಅಂಗೀಕಾರ

೩. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಗಲ್ಫ್ ರಾಷ್ಟ್ರಗಳ ಪ್ರವಾಸ; ಬಹ್ರೇನ್‌ನಲ್ಲಿ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಭೇಟಿ

೪. ಫಿಫಾ ವಿಶ್ವಕಪ್ ಫುಟ್‌ಬಾಲ್; ಸ್ಪೇನ್ ಕ್ವಾರ್ಟರ್‌ಫೈನಲ್‌ಗೆ ಲಗ್ಗೆ, ಪೋರ್ಚುಗಲ್‌ಗೆ ಆಘಾತ

೫. ಜಿಂಬಾಬ್ವೆ ಪ್ರವಾಸಕ್ಕೆ ಭಾರತ ಪುರುಷರ ಕ್ರಿಕೆಟ್ ತಂಡ ಪ್ರಕಟಿಸಿದ ಬಿಸಿಸಿಐ

---

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಜಕಾರ್ತದಲ್ಲಿ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂತೊ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ.

ವಿವಿಧ ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಲು, ಉಭಯ ರಾಷ್ಟ್ರಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಲಿದ್ದಾರೆ.

ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ಸಹಯೋಗವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ತಿಳುವಳಿಕೆ ಪತ್ರಗಳ ವಿನಿಮಯಕ್ಕೂ ಉಭಯ ನಾಯಕರು ಸಾಕ್ಷಿಯಾಗಲಿದ್ದಾರೆ. ಪ್ರಧಾನಿ ಮೋದಿ ಅವರ ಕಾರ್ಯಕ್ರಮಗಳು ಬೆಳಿಗ್ಗೆ ೧೦:೩೦ ಕ್ಕೆ ಔಪಚಾರಿಕ ಸ್ವಾಗತದೊಂದಿಗೆ ಪ್ರಾರಂಭವಾಗಲಿದ್ದು, ನಂತರ ಅತಿಥಿ ಪುಸ್ತಕಕ್ಕೆ ಸಹಿ ಹಾಕಲಾಗುವುದು.

ಅವರು ಇಂಡೋನೇಷ್ಯಾ ಗಣರಾಜ್ಯದ ಕೊಂಪ್ಲೆಕ್ಸ್ ಪಾರ್ಲೆಮೆನ್‌ನಲ್ಲಿಯೂ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಲಿದ್ದಾರೆ, ಇದು ಎರಡೂ ದೇಶಗಳ ನಡುವಿನ ಸಂಸದೀಯ ಸಹಕಾರದ ಮಹತ್ವಕ್ಕೆ ಪ್ರತಿಬಿಂಬವಾಗಿದೆ. ಪ್ರಧಾನಿಯವರು ಅಲ್ಲಿನ ಅನಿವಾಸಿ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬಿಯಾಂತೊ ಅವರ ಆಹ್ವಾನದ ಮೇರೆಗೆ ಮೂರು ದಿನಗಳ ಅಧಿಕೃತ ಪ್ರವಾಸಕ್ಕಾಗಿ ನಿನ್ನೆ ಜಕಾರ್ತಾಗೆ ತಲುಪಿದರು.

ಇಂಡೋನೇಷ್ಯಾದಲ್ಲಿನ ಭಾರತದ ರಾಯಭಾರಿ ಸಂದೀಪ್ ಚಕ್ರವರ್ತಿ, ಪ್ರಧಾನಮಂತ್ರಿಯವರ ಈ ಭೇಟಿಯ ಕುರಿತು ಮಾಹಿತಿ ನೀಡಿ, ಆಗ್ನೇಯ ಏಷ್ಯಾದ ಅತಿ ದೊಡ್ಡ ಆರ್ಥಿಕತೆಯಾಗಿರುವ ಇಂಡೋನೇಷ್ಯಾದೊಂದಿಗೆ ಭಾರತ ಹೊಂದಿರುವ ಕಾರ್ಯತಂತ್ರದ ಪಾಲುದಾರಿಕೆಯನ್ನು ಈ ಭೇಟಿಯು, ಉನ್ನತ ಮಟ್ಟಕ್ಕೆ ಕೊಂಡೊಯ್ಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪ್ರಧಾನಿಯವರ ಈ ಪ್ರವಾಸದ ಅವಧಿಯಲ್ಲಿ ರಕ್ಷಣೆ, ಕಡಲ ಭದ್ರತೆ, ಡಿಜಿಟಲ್ ಸಂಪರ್ಕ, ನಿರ್ಣಾಯಕ ಖನಿಜಗಳು ಹಾಗೂ ದ್ವಿಪಕ್ಷೀಯ ವ್ಯಾಪಾರ ವಲಯಗಳಿಗೆ ಸಂಬಂಧಿಸಿದಂತೆ ಹಲವು ಪ್ರಮುಖ ಮತ್ತು ಐತಿಹಾಸಿಕ ಘೋಷಣೆಗಳು ಹೊರಬೀಳುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

---

ಅಯೋಧ್ಯೆ ರಾಮ ಮಂದಿರ ದೇಣಿಗೆ ದುರ್ಬಳಕೆ ಪ್ರಕರಣದ ಆರೋಪಗಳ ಹಿನ್ನೆಲೆಯಲ್ಲಿ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರೈ ಹಾಗೂ ಟ್ರಸ್ಟ್ ಸದಸ್ಯ ಡಾ. ಅನಿಲ್ ಮಿಶ್ರಾ ಅವರ ರಾಜೀನಾಮೆಗಳನ್ನು ಟ್ರಸ್ಟ್ ನಿನ್ನೆ ಅಂಗೀಕರಿಸಿದೆ.

ಹೊಸ ಪ್ರಧಾನ ಕಾರ್ಯದರ್ಶಿಯ ನೇಮಕವಾಗುವವರೆಗೆ ಕೃಷ್ಣ ಮೋಹನ್ ಅವರನ್ನು ಹಂಗಾಮಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ರಾಮ ಮಂದಿರ ದೇಣಿಗೆ ಅಕ್ರಮ ಪ್ರಕರಣದಲ್ಲಿ ದಾಖಲಾಗಿರುವ ಎಫ್‌ಐಆರ್‌ಗೆ ಕೃಷ್ಣ ಮೋಹನ್ ಸಲ್ಲಿಸಿದ್ದ ದೂರೇ ಆಧಾರವಾಗಿದ್ದು, ಈ ಪ್ರಕರಣದಲ್ಲಿ ಇದುವರೆಗೆ ಎಂಟು ಮಂದಿಯನ್ನು ಬಂಧಿಸಲಾಗಿದೆ.

ಟ್ರಸ್ಟ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹುದ್ದೆಯನ್ನು ಸೃಷ್ಟಿಸಲು ತೀರ್ಮಾನಿಸಿದ್ದು, ಸೂಕ್ತ ಅಭ್ಯರ್ಥಿಗಳ ಹೆಸರನ್ನು ಶಿಫಾರಸು ಮಾಡಲು ಮೂರು ಸದಸ್ಯರ ಸಮಿತಿಯನ್ನು ರಚಿಸಲಾಗಿದೆ.

ಟ್ರಸ್ಟ್‌ನ ವಿಶೇಷ ಆಹ್ವಾನಿತರ ಪಟ್ಟಿಯಿಂದ ಗೋಪಾಲ್ ನಗರ ಕೋಟೆ ಅವರ ಹೆಸರನ್ನೂ ಕೈಬಿಡಲಾಗಿದೆ.

ಸಭೆಯ ಬಳಿಕ ಟ್ರಸ್ಟ್ ಖಜಾಂಚಿ ಗೋವಿಂದ ದೇವ್ ಗಿರಿ ಹಾಗೂ ಹಂಗಾಮಿ ಪ್ರಧಾನ ಕಾರ್ಯದರ್ಶಿ ಕೃಷ್ಣ ಮೋಹನ್ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಗೋವಿಂದ ದೇವ್ ಗಿರಿ, ಈ ಪ್ರಕರಣದ ಹಿಂದೆ ಸಂಚು ಇರುವ ಸಾಧ್ಯತೆಯನ್ನು ತಳ್ಳಿಹಾಕಲು ಸಾಧ್ಯವಿಲ್ಲ ಎಂದು ಹೇಳಿದರು.

ಟ್ರಸ್ಟ್‌ಗೆ ಭಕ್ತರು ನೀಡಿರುವ ಆಭರಣಗಳು ಮತ್ತು ಇತರ ಅಮೂಲ್ಯ ವಸ್ತುಗಳನ್ನು ಮಾಧ್ಯಮಗಳಲ್ಲಿ ಪ್ರದರ್ಶಿಸಲಾಗಿದ್ದು, ದೇಣಿಗೆಯಾಗಿ ಬಂದಿರುವ ಎಲ್ಲ ವಸ್ತುಗಳು ಸುರಕ್ಷಿತವಾಗಿದ್ದು, ಅವುಗಳ ಸಮರ್ಪಕ ಲೆಕ್ಕಪತ್ರವನ್ನು ನಿರ್ವಹಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಲಾಗಿದೆ. ದೇಣಿಗೆ ವಸ್ತುಗಳ ವಿವರಗಳನ್ನು ಆಸಕ್ತರು ಟ್ರಸ್ಟ್‌ನಿಂದ ಪಡೆಯಬಹುದಾಗಿದೆ ಎಂದು ತಿಳಿಸಲಾಗಿದೆ.

ಹಂಗಾಮಿ ಪ್ರಧಾನ ಕಾರ್ಯದರ್ಶಿ ಕೃಷ್ಣ ಮೋಹನ್, ಈ ವಿವಾದದಿಂದ ಟ್ರಸ್ಟ್‌ನ ಪ್ರತಿಷ್ಠೆಗೆ ಧಕ್ಕೆಯಾಗಿದೆ ಎಂದು ಒಪ್ಪಿಕೊಂಡರು.

ಈ ನಡುವೆ, ತನ್ನ ಅಧಿಕೃತ ಪ್ರಕಟಣೆಯಲ್ಲಿ ಟ್ರಸ್ಟ್, ಕೋಟ್ಯಂತರ ರಾಮ ಭಕ್ತರು ರಾಮ ಮಂದಿರದ ಮೇಲೆ ಅಚಲವಾದ ನಂಬಿಕೆ ಹೊಂದಿದ್ದು, ದೇಣಿಗೆ ದುರ್ಬಳಕೆ ಪ್ರಕರಣ ಬೆಳಕಿಗೆ ಬಂದ ನಂತರವೂ ದೇವಾಲಯಕ್ಕೆ ಆಗಮಿಸುವ ಭಕ್ತರ ಸಂಖ್ಯೆಯಲ್ಲಿ ಯಾವುದೇ ಇಳಿಕೆಯಾಗಿಲ್ಲ ಎಂದು ತಿಳಿಸಿದೆ.

---

ಸುಮಾರು ೪.೫ ಶತಕೋಟಿ ಡಾಲರ್ ಮೌಲ್ಯದ ರಫ್ತು ಹೊಂದಿರುವ ಭಾರತದ ಚರ್ಮ ಮತ್ತು ಪಾದರಕ್ಷೆ ಉದ್ಯಮ ಮುಕ್ತ ವ್ಯಾಪಾರ, ಒಪ್ಪಂದಗಳ ಮೂಲಕ ೩೮ ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ ಮಾರುಕಟ್ಟೆಗಳನ್ನು ತೆರೆದಿರುವ ಹಿನ್ನೆಲೆಯಲ್ಲಿ

ಮಹತ್ತರ ಬೆಳವಣಿಗೆಯ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ನವದೆಹಲಿದಲ್ಲಿ ನಡೆದ ಚರ್ಮ ರಫ್ತು ಮಂಡಳಿಯ ೨೦೨೪-೨೫ನೇ ಸಾಲಿನ ರಾಷ್ಟ್ರೀಯ ರಫ್ತು ಶ್ರೇಷ್ಠತಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಅಮೆರಿಕ, ಓಮನ್, ಯುನೈಟೆಡ್ ಅರಬ್ ಎಮಿರೇಟ್ಸ್ ಸೇರಿದಂತೆ ಹಲವು ರಾಷ್ಟ್ರಗಳೊಂದಿಗೆ ಭಾರತ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಂಡಿದೆ ಎಂದರು.

---

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಬಹ್ರೇನ್‌ನಲ್ಲಿ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಬಗ್ಗೆ ಚರ್ಚಿಸಿದರು.

ಕುವೈತ್ ಮತ್ತು ಒಮಾನ್ ಸೇರಿದಂತೆ ನಾಲ್ಕು ರಾಷ್ಟ್ರಗಳ ಗಲ್ಫ್ ಭೇಟಿಯ ಎರಡನೇ ಹಂತದಲ್ಲಿ ಜೈಶಂಕರ್ ಕತಾರ್‌ನಿಂದ ಬಹ್ರೇನ್‌ಗೆ ಆಗಮಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಶುಭಾಶಯಗಳನ್ನು ಸಚಿವರು ರಾಜರಿಗೆ ತಿಳಿಸಿದರು ಮತ್ತು ಬಹ್ರೇನ್‌ನಲ್ಲಿರುವ ಭಾರತೀಯ ವಲಸಿಗರ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಖಾತ್ರಿಪಡಿಸಿದ್ದಕ್ಕಾಗಿ ಅವರಿಗೆ ಧನ್ಯವಾದ ಅರ್ಪಿಸಿದರು.

ಸಚಿವ ಡಾ.ಜೈಶಂಕರ್ ಬಹ್ರೇನ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಕೂಡ ಸಂವಾದ ನಡೆಸಿದರು.

ಪ್ರಸ್ತುತ ಪ್ರವಾಸದ ಸಂದರ್ಭದಲ್ಲಿ ಸಚಿವರು, ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ಮತ್ತು ಪ್ರಾದೇಶಿಕ ಬೆಳವಣಿಗೆಗಳು ಹಾಗೂ ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು, ನಾಲ್ಕು ಗಲ್ಫ್ ರಾಷ್ಟ್ರಗಳ ವಿದೇಶಾಂಗ ಸಚಿವರು ಮತ್ತು ಉನ್ನತ ನಾಯಕರನ್ನು ಭೇಟಿಯಾಗುತ್ತಿದ್ದಾರೆ.

---

ಬುಡಕಟ್ಟು ವ್ಯವಹಾರಗಳ ಸಚಿವಾಲಯವು ಒಡಿಶಾದ ಭುವನೇಶ್ವರದಲ್ಲಿ ಇಂದಿನಿಂದ ಎರಡು ದಿನಗಳ 'ಬುಡಕಟ್ಟು ಸಂಶೋಧನಾ ಸಂಸ್ಥೆಗಳ-ಟಿಆರ್‌ಐ ಬಲವರ್ಧನೆ' ಕುರಿತ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ.

ಕಾರ್ಯಾಗಾರವನ್ನು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುವಲ್ ಓರಾಂ ಉದ್ಘಾಟಿಸಲಿದ್ದಾರೆ. ದೇಶದ ವಿವಿಧ ಭಾಗಗಳಿಂದ ಸುಮಾರು ೨೦೦ ಪ್ರತಿನಿಧಿಗಳು ಈ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ.

ಬುಡಕಟ್ಟು ಸಂಶೋಧನಾ ಸಂಸ್ಥೆಗಳ ಸಾಮರ್ಥ್ಯ ವೃದ್ಧಿ, ಉತ್ತಮ ಕಾರ್ಯಪದ್ಧತಿಗಳ ವಿನಿಮಯ ಹಾಗೂ ಬುಡಕಟ್ಟು ಸಮುದಾಯಗಳ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಕಾರ್ಯಾಗಾರದಲ್ಲಿ ಚರ್ಚೆ ನಡೆಯಲಿದೆ.

---

ಕರಾವಳಿ ಕರ್ನಾಟಕ, ಗುಜರಾತ್, ಕೊಂಕಣ ಮತ್ತು ಗೋವಾ ಹಾಗೂ ಮಧ್ಯ ಮಹಾರಾಷ್ಟ್ರದ ಕೆಲವು ಭಾಗಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಒಳನಾಡು ಕರ್ನಾಟಕ, ಅರುಣಾಚಲ ಪ್ರದೇಶ, ಬಿಹಾರ, ಛತ್ತೀಸ್‌ಗಢ, ಪೂರ್ವ ರಾಜಸ್ಥಾನ, ಹಿಮಾಚಲ ಪ್ರದೇಶ, ಮಧ್ಯಪ್ರದೇಶ, ಉಪ-ಹಿಮಾಲಯ ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನ ಕೆಲವು ಭಾಗಗಳಲ್ಲಿಯೂ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ.

ಮುಂಬೈ ಹಾಗೂ ಮಹಾರಾಷ್ಟ್ರದ ಕರಾವಳಿ ಭಾಗಗಳಲ್ಲಿ ಭಾರೀ ಮಳೆ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಭೂಕುಸಿತ, ಪ್ರವಾಹ ಹಾಗೂ ವ್ಯಾಪಕ ಹಾನಿ ಸಂಭವಿಸಿದೆ. ಮುಂದಿನ ಎರಡು ದಿನಗಳ ಕಾಲವೂ ತೀವ್ರ ಮಳೆಯ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಲ್ಲಾ ವಿಪತ್ತು ನಿರ್ವಹಣಾ ಸಂಸ್ಥೆಗಳನ್ನು ಕಟ್ಟೆಚ್ಚರದಲ್ಲಿರಿಸಿದೆ. ಭಾರತೀಯ ಹವಾಮಾನ ಇಲಾಖೆ ರಾಜ್ಯದ ಹಲವು ಜಿಲ್ಲೆಗಳಿಗೆ 'ರೆಡ್ ಅಲರ್ಟ್' ಘೋಷಿಸಿದೆ.

---

ಕಳೆದ ರಾತ್ರಿ ಡಲ್ಲಾಸ್ ಕ್ರೀಡಾಂಗಣದಲ್ಲಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ೧೬ರ ಸುತ್ತಿನ ಪಂದ್ಯದಲ್ಲಿ ಪೋರ್ಚುಗಲ್ ವಿರುದ್ಧ ೧-೦ ಗೋಲುಗಳಿಂದ ಜಯಗಳಿಸಿದ ಸ್ಪೇನ್, ಕ್ವಾರ್ಟರ್ ಫೈನಲ್‌ಗೆ ಲಗ್ಗೆಯಿಟ್ಟಿತು. ಆ ಮೂಲಕ ಪೋರ್ಚುಗಲ್‌ನ ವಿಶ್ವಕಪ್ ಕನಸು ಭಗ್ನಗೊಂಡಿದೆ.

ಮೈಕೆಲ್ ಮೆರಿನೊ ದ್ವಿತೀಯಾರ್ಧದ ಸ್ಟಾಪೇಜ್ ಸಮಯದ ಮೊದಲ ನಿಮಿಷದಲ್ಲಿ ಗಳಿಸಿದ ಗೋಲು ಸ್ಪೇನ್‌ಗೆ ಗೆಲುವು ತಂದುಕೊಟ್ಟರು.

೨೦೧೦ ರಲ್ಲಿ ದಕ್ಷಿಣ ಆಫ್ರಿಕಾದಲ್ಲಿ ತನ್ನ ಏಕೈಕ ವಿಶ್ವಕಪ್ ಪ್ರಶಸ್ತಿಯನ್ನು ಗೆದ್ದ ನಂತರ ಸ್ಪೇನ್ ಮೊದಲ ಬಾರಿಗೆ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿದೆ.

---

ಜಿಂಬಾಬ್ವೆ ಪ್ರವಾಸಕ್ಕೆ ಭಾರತ ಪುರುಷರ ತಂಡವನ್ನು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಪ್ರಕಟಿಸಿದೆ. ಈ ಪ್ರವಾಸದಲ್ಲಿ ಇದೇ ೨೩, ೨೫ ಮತ್ತು ೨೭ರಂದು ಮೂರು ಅಂತಾರಾಷ್ಟ್ರೀಯ ಟಿ-೨೦ ಪಂದ್ಯಗಳು ನಡೆಯಲಿದ್ದು, ಎಲ್ಲ ಪಂದ್ಯಗಳೂ ಹರಾರೆಯಲ್ಲಿ ಜರುಗಲಿವೆ.

ವಿಶ್ವಕಪ್ ವಿಜೇತ ವಿಕೆಟ್‌ಕೀಪರ್ ಬ್ಯಾಟರ್ ಸಂಜು ಸ್ಯಾಮ್ಸನ್ ಅವರನ್ನು ಈ ಬಾರಿ ತಂಡದಿಂದ ಕೈಬಿಡಲಾಗಿದೆ. ವೇಗದ ಬೌಲರ್‌ಗಳಾದ ಯಶ್ ಠಾಕೂರ್ ಹಾಗೂ ಅಶೋಕ್ ಶರ್ಮಾ ಅವರಿಗೆ ಮೊದಲ ಬಾರಿಗೆ ಭಾರತ ತಂಡದಲ್ಲಿ ಸ್ಥಾನ ನೀಡಲಾಗಿದೆ.

ಆಯ್ಕೆ ಸಮಿತಿಯ ಅಧ್ಯಕ್ಷ ಅಜಿತ್ ಅಗರ್ಕರ್ ನೇತೃತ್ವದ ಆಯ್ಕೆ ಸಮಿತಿಯು ಸಂಜು ಸ್ಯಾಮ್ಸನ್ ಬದಲಿಗೆ ಪಂಜಾಬ್‌ನ ವಿಕೆಟ್‌ಕೀಪರ್ ಬ್ಯಾಟರ್ ಪ್ರಭ್‌ಸಿಮ್ರನ್ ಸಿಂಗ್ ಅವರನ್ನು ಮೊದಲ ಬಾರಿಗೆ ತಂಡಕ್ಕೆ ಆಯ್ಕೆ ಮಾಡಿದೆ.

ವೇಗದ ಬೌಲರ್ ಮಯಾಂಕ್ ಯಾದವ್ ಅವರು ೨೦೨೪ರ ಬಳಿಕ ಮೊದಲ ಬಾರಿಗೆ ಭಾರತ ತಂಡಕ್ಕೆ ಮರಳಿದ್ದಾರೆ.

---

ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿ ಇಂದು ರಾತ್ರಿ ನಡೆಯಲಿರುವ ೫ ಪಂದ್ಯಗಳ ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ೩ನೇ ಪಂದ್ಯದಲ್ಲಿ ಭಾರತ ತಂಡ, ಆತಿಥೇಯ ಇಂಗ್ಲೆಂಡ್ ವಿರುದ್ಧ ಸೆಣಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦ ಗಂಟೆಗೆ ಆರಂಭವಾಗಲಿದೆ.

__________ ಮುಕ್ತಾಯ _________